—2—

## ದಿನಾಂಕ: 21/05/2022 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-141 ಆಜಾದ್‌ನಗರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು:**

| ಕ್ರ. ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ |
|---|---|---|
| 1 | ಶ್ರೀ. ಟಿ. ಶ್ರೀನಿವಾಸರಾಜು | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-141 |
| 2 | | ಆರಕ್ಷಕ ನಿರೀಕ್ಷಕರು, ಚಾಮರಾಜಪೇಟೆ/ಬ್ಯಾಟರಾಯನಪುರ ಉಪವಿಭಾಗ |
| 3 | ಶ್ರೀ. ಪ್ರಶಾಂತ್ | ಬೆಸ್ಕಾಂ ಅಭಿಯಂತರರು |
| 4 | ಶ್ರೀ. ಶಿವಕುಮಾರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ನೌಕರರು |
| 5 | | ಕಂದಾಯ ಪರಿವೀಕ್ಷಕರು |
| 6 | ಶ್ರೀ. ಶ್ರೀನಿವಾಸ್/ ಶ್ರೀ. ರಾಮಕೃಷ್ಣ/ಶ್ರೀ. ಯಶವಂತ್ | ಹಿರಿಯ/ ಕಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ. ಮಂಜುನಾಥ್ | ಹೆಡ್ ಗ್ಯಾಂಗ್‌ಮೆನ್ ಮತ್ತು ಮಾರ್ಷಲ್‌ಗಳು |
| 8 | ಹಾಗೂ ಇತರೆ ಸಾರ್ವಜನಿಕರುಗಳು | |

1. ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ: 141 ರ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿರವರು ಆಯುಕ್ತರ ತುರ್ತು ಸಭೆಯಲ್ಲಿ ಭಾಗವಹಿಸಬೇಕಾಗಿರುವುದರಿಂದ ತಾವು ಬರಲು ಸಾಧ್ಯವಿರುವುದಿಲ್ಲವೆಂದು ಹಾಗೂ ಸಭೆಯಲ್ಲಿ ಕಾರ್ಯದರ್ಶಿ ರವರ ಅಧ್ಯಕ್ಷತೆಯಲ್ಲಿ ನಿರ್ವಹಿಸುವಂತೆ ತಿಳಿಸಿರುವ ಮೇರೆಗೆ ಸಂಚಾಲಕರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಪರಿಚಯದೊಂದಿಗೆ ವಿವರಿಸುತ್ತಾ ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.
2. ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್-141 ರವರ ಅಧ್ಯಕ್ಷತೆಯಲ್ಲಿ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.
3. ವಾರ್ಡ್‌ನ ವ್ಯಾಪ್ತಿಯಲ್ಲಿ ಶ್ರೀ. ಪ್ರದೀಪ್, NGO ಭಾರತೀಯ ನಾಗರೀಕ ಪೌಂಡೇಷನ್ ರವರು ಕೆ.ಎಂ.ಸಿ. ಕಾಯ್ದೆ ಅನ್ವಯ ವಾರ್ಡ್ ಕಮಿಟಿ ಸಭೆಯನ್ನು ನಡೆಸಲು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ. ಈ ಬಗ್ಗೆ ಸಹಾಯಕ ಅಭಿಯಂತರರು ಮಾತನಾಡಿ ಪ್ರಸ್ತುತ ಬಿಬಿಎಂಪಿ ವ್ಯಾಪ್ತಿಯಲ್ಲಿ ಬಿಬಿಎಂಪಿ ಕಾಯ್ದೆ 2020 ಚಾಲ್ತಿಯಲ್ಲಿದ್ದು, ಅದರನ್ವಯ ಸಭೆ ನಡೆಸುತ್ತಿರುವುದಾಗಿ ತಿಳಿಸಿರುತ್ತಾರೆ. ಹಾಗೂ ಮುಂದಿನ ಸಭೆಯಲ್ಲಿ ಈ ಬಗ್ಗೆ ವಿವರಣೆ ನೀಡುವುದಾಗಿ ತಿಳಿಸಿರುತ್ತಾರೆ.

   (ಅಧ್ಯಕ್ಷರು/ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ: 141 ರವರು ಕ್ರಮವಹಿಸುವುದು)

4. ವಾರ್ಡ್‌ನ ವ್ಯಾಪ್ತಿಯಲ್ಲಿ ಮನೆಗಳಿಂದ ಕಸ ಸರಿಯಾಗಿ ಸಂಗ್ರಹಿಸುತ್ತಿಲ್ಲವೆಂದು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ. ಈ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡು ವಾರ್ಡ್‌ನ ವ್ಯಾಪ್ತಿಯಲ್ಲಿ ಕಸ ಸಂಗ್ರಹಿಸಲು 18 ಆಟೋಗಳು ಮಂಜೂರಾಗಿದ್ದು, ಅದರಲ್ಲಿ 12 ಆಟೋಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ 06

ಮು.ತಿ.ನೋ (2) ಕ್ಕೆ

ಆಟೋಗಳು ತಾಂತ್ರಿಕ ನಿರ್ವಹಣೆಯಲ್ಲಿದ್ದು, ಶೀಘ್ರವಾಗಿ ಬದಲಿ ಆಟೋಗಳನ್ನು ಪಡೆದು ಕಸ ಸಂಗ್ರಹಿಸಲು ಕ್ರಮವಹಿಸುವುದಾಗಿ ತಿಳಿಸಿರುತ್ತಾರೆ.

(ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (ಚಾಮರಾಜಪೇಟೆ) ವಿಭಾಗ ರವರು ಕ್ರಮವಹಿಸುವುದು)

5. ವಾರ್ಡ್‌ನ ವ್ಯಾಪ್ತಿಯ ಪೈಪ್‌ಲೈನ್ ರಸ್ತೆ, ಮಸೀದಿ ರಸ್ತೆ, ಗ್ಯಾಸ್ ಗೋಡೌನ್ ರಸ್ತೆ, ಅಶ್ವಥಕಟ್ಟೆ ರಸ್ತೆ ಮುಂತಾದ ಕಡೆ ರಸ್ತೆ ಬದಿಯಲ್ಲಿ ಅನಧಿಕೃತವಾಗಿ ಲಘು ವಾಹನಗಳನ್ನು ಎಲ್ಲೆಂದರಲ್ಲಿ ಪಾರ್ಕಿಂಗ್ ಮಾಡಲಾಗಿರುತ್ತದೆ. ಇದರಿಂದ ಸುಗಮ ವಾಹನ ಸಂಚಾರಕ್ಕೆ ತೊಂದರೆಯುಂಟಾಗಿರುವುದಾಗಿ ಹಾಗೂ ಈ ಬಗ್ಗೆ ಕ್ರಮವಹಿಸಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

(ಇನ್ಸ್‌ಪೆಕ್ಟರ್ (ಸಂಚಾರ) (ಬ್ಯಾಟರಾಯನಪುರ/ಚಾಮರಾಜಪೇಟೆ ವಿಭಾಗ ರವರು ಕ್ರಮವಹಿಸುವುದು)

6. ವಾರ್ಡ್‌ನ ವ್ಯಾಪ್ತಿಯ 5ನೇ ಅಡ್ಡರಸ್ತೆ, 2ನೇ ಮುಖ್ಯರಸ್ತೆ, ಆಜಾದ್‌ನಗರದಲ್ಲಿ ಕುಡಿಯುವ ಕಲಷಿತ ಕುಡಿಯುವ ನೀರು ಸರಬರಾಜು ಆಗುತ್ತಿರುತ್ತದೆಂದು ಶ್ರೀ. ರಾಮಣ್ಣ ರವರು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

(ಸಹಾಯಕ /ಕಿರಿಯ ಅಭಿಯಂತರರು (BWSSB) ವಿಭಾಗ ರವರು ಕ್ರಮವಹಿಸುವುದು)

7. ವಾರ್ಡ್‌ನ ವ್ಯಾಪ್ತಿಯ ಕರಿತಿಮ್ಮನಹಳ್ಳಿ ಆಟದ ಮೈದಾನ ಶುಚಿಗೊಳಿಸಲು ಹಾಗೂ ಅದರ ಗೇಟಿನ ಕೀ ಅನ್ನು ನೀಡುವಂತೆ ಕೋರಿ ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

(ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 141 ರವರು ಕ್ರಮವಹಿಸುವುದು)

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

Srinivasa B.T

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು ತಮ್ಮ ಮಾಹಿತಿಗಾಗಿ ಸಲ್ಲಿಸಿದೆ:-

1. ಮಾನ್ಯ ಆಡಳಿತಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
5. ಮಾನ್ಯ ವಲಯ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಲಾಗಿದೆ.
6. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಲಾಗಿದೆ.
7. ಮುಖ್ಯ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಲಾಗಿದೆ.
8. ಕಾರ್ಯಪಾಲಕ ಅಭಿಯಂತರರು (ಚಾಮರಾಜಪೇಟೆ) ವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
9. ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ಪಶ್ಚಿಮ) ವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಚಾಮರಾಜಪೇಟೆ) ಉಪವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (ಚಾಮರಾಜಪೇಟೆ) ವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
12. ಸಹಾಯಕ ಕಂದಾಯ ಅಧಿಕಾರಿ (ಚಾಮರಾಜಪೇಟೆ) ಉಪವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (BWSSB) ಉಪವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
14. ಕಚೇರಿ ಕಡತಕ್ಕೆ.